**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. ರವರು ನಿಯಮ 72ರಡಿಯಲ್ಲಿ ನೀಡಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.**

ವಿಷಯ:

ರಾಜ್ಯದ ಸರ್ಕಾರಿ ಶಾಲೆಗಳ ಮಕ್ಕಳಿಗೆ ಶೂ ಮತ್ತು ಸಾಕ್ಸ್ ಖರೀದಿಗೆ ಪ್ರಸ್ತುತ ನಿಗದಿಪಡಿಸಿರುವ ಮೊತ್ತ ಅತ್ಯಂತ ಕಡಿಮೆ ಇದ್ದು, ಪ್ರಸ್ತುತ ದಿನಮಾನದಲ್ಲಿ ಈ ಹಣದಲ್ಲಿ ಗುಣಮಟ್ಟದ ಶೂ ಮತ್ತು ಸಾಕ್ಸ್ ಖರೀದಿ ಸಾಧ್ಯವೇ ಇಲ್ಲ. ಪ್ರಸ್ತುತ ನಿಗದಿ ಮಾಡಿರುವ ಅಲ್ಪ ಮೊತ್ತಕ್ಕೆ ಕಳಪೆ ವಸ್ತುಗಳು ಮಾತ್ರ ಬರಲು ಸಾಧ್ಯ. ಸರ್ಕಾರ ಸೌಲಭ್ಯಗಳೇನೋ ನೀಡುತ್ತದೆ. ಆದರೆ, ಅವು ಗುಣಮಟ್ಟದಿಂದ ಕೂಡಿರದಿದ್ದರೆ, ಸಮರ್ಪಕವಾಗಿ ಇರದಿದ್ದರೆ ಅದರಿಂದ ವಿದ್ಯಾರ್ಥಿಗಳಿಗೆ ಏನು ಪ್ರಯೋಜನ ಆಗುವುದಿಲ್ಲ.

ಪ್ರಸ್ತುತ ಮಾರುಕಟ್ಟೆ ದರವನ್ನು ಅವಲೋಕಿಸಿ, ಗುಣಮಟ್ಟದ ಶೂ ಮತ್ತು ಸಾಕ್ಸ್ ಖರೀದಿ ಮಾಡಲು ನೈಜವಾಗಿ ಬೇಕಾದ ಮೊತ್ತವನ್ನು ನಿಗದಿಪಡಿಸಲು ಇದುವರೆಗೆ ಸೂಕ್ತ ಕ್ರಮವಹಿಸದಿರುವ ಕಾರಣದಿಂದಾಗಿ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತೆ ಸಚಿವರ ಗಮನವನ್ನು ಸೆಳೆಯಲು ಬಯಸುತ್ತೇನೆ.

ಉತ್ತರ :

ವಿದ್ಯಾವಿಕಾಸ ಯೋಜನೆಯಡಿ ಸರ್ಕಾರಿ ಶಾಲಾ ಮಕ್ಕಳಿಗೆ ಶೈಕ್ಷಣಿಕ ವರ್ಷದಲ್ಲಿ ಒಂದು ಜೊತೆ ಶೂ(ಪಾದರಕ್ಷೆ) ಮತ್ತು ಎರಡು ಜೊತೆ ಸಾಕ್ಸ್‌ಗಳನ್ನು ಉಚಿತವಾಗಿ ಒದಗಿಸಲಾಗುತ್ತಿದೆ.

2024-25ನೇ ಸಾಲಿಗೆ ಸರ್ಕಾರಿ ಶಾಲೆಗಳ 1ನೇ ತರಗತಿಯಿಂದ 10ನೇ ತರಗತಿಯ ವಿದ್ಯಾರ್ಥಿಗಳಿಗೆ ಒಂದು ಜೊತೆ ಶೂ ಮತ್ತು ಎರಡು ಜೊತೆ ಸಾಕ್ಸ್‌ಗಳನ್ನು ಒದಗಿಸಲು ಸರ್ಕಾರಿ ಆದೇಶ ಸಂಖ್ಯೆ: ಇಪಿ 54 ಎಂಪಿಇ 2024, ಬೆಂಗಳೂರು, ದಿನಾಂಕ:28.05.2024ರಲ್ಲಿ ರೂ.121.00 ಕೋಟಿಗಳ ಅನುದಾನವನ್ನು ಒದಗಿಸಲಾಗಿದ್ದು, ಕೆಳಕಂಡಂತೆ ಶೂ ಮತ್ತು ಸಾಕ್ಸ್‌ಗಳ ದರಗಳನ್ನು ನಿಗದಿಪಡಿಸಲಾಗಿದೆ (ಸರ್ಕಾರದ ಆದೇಶವನ್ನು **ಅನುಬಂಧ-1**ರಲ್ಲಿ ಲಗತ್ತಿಸಿದೆ).

**ಶೂ ಮತ್ತು ಸಾಕ್ಸ್‌ಗಳ ದರಗಳು**

1) 1 ರಿಂದ 5ನೇ ತರಗತಿ ವಿದ್ಯಾರ್ಥಿಗಳಿಗೆ : ತಲಾ ರೂ.265/-
2) 6 ರಿಂದ 8ನೇ ತರಗತಿ ವಿದ್ಯಾರ್ಥಿಗಳಿಗೆ : ತಲಾ ರೂ.295/-
3) 9 ರಿಂದ 10ನೇ ತರಗತಿ ವಿದ್ಯಾರ್ಥಿಗಳಿಗೆ : ತಲಾ ರೂ.325/-

ಆದಾಗ್ಯೂ, ಸೇವಾ ದೃಷ್ಟಿಯಿಂದ ದಾನಿಗಳು, ಖಾಸಗಿ ಸಂಸ್ಥೆಗಳು ಈ ಉದ್ದೇಶಕ್ಕಾಗಿ ಹೆಚ್ಚುವರಿ ಹಣ ನೀಡಿದ್ದಲ್ಲಿ, ಇದನ್ನೂ ಬಳಸಿಕೊಂಡು ಇನ್ನೂ ಉತ್ತಮ ಗುಣಮಟ್ಟದ ಶೂ ಮತ್ತು ಸಾಕ್ಸ್ ಖರೀದಿಸಿ ವಿತರಿಸಲು ಅವಕಾಶ ಕಲ್ಪಿಸಲಾಗಿದೆ.

ಶೂ ಮತ್ತು ಸಾಕ್ಸ್‌ಗಳನ್ನು ರಾಷ್ಟ್ರಮಟ್ಟದ ಹೆಸರಾಂತ ಕಂಪನಿಗಳ ಪ್ರತಿಷ್ಠಿತ ಬ್ರ್ಯಾಂಡ್‌ಗಳನ್ನು ಅಧಿಕೃತ ಮಾರಾಟಗಾರರಿಂದ ISO CERTIFIED ಶೂ ಮತ್ತು ಸಾಕ್ಸ್ ಅಥವಾ ಪಾದರಕ್ಷೆಗಳನ್ನು ಖರೀದಿಸತಕ್ಕದ್ದು ಎಂದು ಆದೇಶಿಸಲಾಗಿದೆ.

ಜಿಲ್ಲಾ ಪಂಚಾಯತ್ ಕಾರ್ಯನಿರ್ವಾಹಣಾಧಿಕಾರಿಯವರ ಮೇಲ್ವಿಚಾರಣೆಯಲ್ಲಿ ಪ್ರತಿಯೊಂದು ತಾಲ್ಲೂಕಿನಲ್ಲಿ ಕನಿಷ್ಠ ಶೇ.5ರಷ್ಟು ಶಾಲೆಗಳಲ್ಲಿನ ಶೂ ಮತ್ತು ಸಾಕ್ಸ್ ಗುಣಮಟ್ಟವನ್ನು ಯಾದೃಚ್ಛಿಕವಾಗಿ ಪರೀಕ್ಷಿಸಲು ಒಂದು ಸಮಿತಿ ರಚಿಸಲು ಆದೇಶಿಸಿದೆ.

ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಸುತ್ತೋಲೆ ಸಂಖ್ಯೆ: ಸಿಪಿಇ(1)/ಮು.ಯೋ.ಅನು.ಶೂ ಮತ್ತು ಸಾಕ್ಸ್ 06/2024-25, ದಿನಾಂಕ:29.05.2024ರಲ್ಲಿ ನಿರ್ದಿಷ್ಟತೆಗನುಗುಣವಾಗಿ (Specification) ಉತ್ತಮ ಗುಣಮಟ್ಟದ ಶೂ-ಸಾಕ್ಸ್‌ಗಳನ್ನು ಶಾಲಾಭಿವೃದ್ಧಿ ಸಮಿತಿ ಖರೀದಿಸಿ ನೀಡಲು ಮತ್ತು ಯಾವುದೇ ಕಾರಣಕ್ಕೂ ಕಳಪೆ ಗುಣಮಟ್ಟದ ಶೂ-ಸಾಕ್ಸ್‌ಗಳನ್ನು ನೀಡದಿರಲು ಸೂಚಿಸಲಾಗಿದೆ (ಸುತ್ತೋಲೆಯ ಪ್ರತಿಯನ್ನು **ಅನುಬಂಧ-2**ರಲ್ಲಿ ಲಗತ್ತಿಸಿದೆ).

ಸರ್ಕಾರವು ನಿಗದಿಪಡಿಸಿರುವ ಶೂ-ಸಾಕ್ಸ್‌ಗಳ ದರಗಳಿಗೆ ಮಾರುಕಟ್ಟೆಯಲ್ಲಿ ಉತ್ತಮ ಗುಣಮಟ್ಟದ ಶೂ-ಸಾಕ್ಸ್‌ಗಳನ್ನು ಸಗಟು ಖರೀದಿಗೆ ಅವಕಾಶವಿದ್ದು, ಶೂ-ಸಾಕ್ಸ್‌ಗಳ ದರ ಪರಿಷ್ಕರಣೆ ಬಗ್ಗೆ ಯಾವುದೇ ಮನವಿಗಳು ಸ್ವೀಕೃತವಾಗಿರುವುದಿಲ್ಲ.

**ಸಂಖ್ಯೆ : ಇಪಿ 70 ಎಂಪಿಇ 2024**

(ಎಸ್.ಮಧು ಬಂಗಾರಪ್ಪ)
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು**